**ಅರ್ಜಿಯ ಮೇರೆಗೆ ಸಾಕ್ಷಿಯನ್ನು ದಿಃ *15/01/2025* ರಂದು ಪುನಃ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರೆದ ಮುಖ್ಯ ವಿಚಾರಣೆ ಃ ಅರ್ಜಿದಾರರ ಪರ ವಕೀಲರಿಂದ.**

ನಾನು ನ್ಯಾಯಾಲಯಕ್ಕೆ ಈ ಕೆಳಗಿನ ದಾಖಲೆಗಳನ್ನು ಹಾಜರುಪಡಿಸುತ್ತಿದ್ದೇನೆ.

| ಅ.ನಂ. | ದಾಖಲೆಗಳು |
|---|---|
| ನಿ.ಪಿ.8 | ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯವರು ನೀಡಿರುವ ಗುತ್ತಿಗೆದಾರ ಪರವಾನಿಗೆ ಪತ್ರ |

ಆದುದರಿಂದ ಪ್ರಮಾಣಪತ್ರ ಮತ್ತು ದಾಖಲೆಗಳನ್ನು ಪರಿಶೀಲಿಸಿ ಅರ್ಜಿಯನ್ನು ಪುರಸ್ಕರಿಸಬೇಕಾಗಿ ವಿನಂತಿ.

***ಪಾಟೀ ಸವಾಲು ಃ 2 ನೇ ಎದುರುದಾರರ ಪರವಾಗಿ.***

ನಿ.ಪಿ.8 ರಲ್ಲಿರುವ ವಿಷಯ ಸಂಗತಿಗಳು ನನಗೆ ಗೊತ್ತಾಗುವುದಿಲ್ಲ. ಸದರಿ ಪರವಾನಿಗೆಯ ಮೇಲೆ ಯಾವ ಯಾವ ಗುತ್ತಿಗೆ ಕೆಲಸ ಮಾಡಿದ್ದೇನೆ ಎಂದು ನಮೂದಿಸಿಲ್ಲ. ಸದರಿ ದಾಖಲೆ ಪ್ರಕಾರ ಮಹಾನಗರ ಪಾಲಿಕೆಯವರು ನಿಮ್ಮ ಪರವಾಗಿ ಎಷ್ಟು ಗುತ್ತಿಗೆ ಕೆಲಸಗಳನ್ನು ಮಂಜೂರು ಮಾಡಿರುತ್ತಾರೆ ಎಂಬ ಪ್ರಶ್ನೆಗೆ ಸಾಕ್ಷಿದಾರರು 2017 ನೇ ಇಸ್ವಿಯವರೆಗೆ ಗುತ್ತಿಗೆ ಕೆಲಸ ಮಾಡಿರುತ್ತೇನೆ ನಂತರ ಮಾಡಿರುವುದಿಲ್ಲ ಎಂದು ಉತ್ತರಿಸುತ್ತಾರೆ. ಈ ರೀತಿ ಗುತ್ತಿಗೆ ಕೆಲಸಗಳನ್ನು ಮಾಡಲು ನನಗೆ ಆಗುವುದಿಲ್ಲ ಎಂದು ಸದರಿ ಪರವಾನಿಗೆಯನ್ನು ನಾನು ಮಹಾನಗರ ಪಾಲಿಕೆಗೆ ರದ್ದು ಮಾಡಿ ಎಂದು ಕೇಳಿರುವುದಿಲ್ಲ. ಸದರಿ ಅಪಘಾತದ ಗಾಯಗಳಿಗೆ ಮತ್ತು ನಿ.ಪಿ.8 ಕ್ಕೆ ಯಾವುದೇ ರೀತಿ ಸಂಬಂಧವಿಲ್ಲ ಎಂದು ಸೂಚಿಸುವ ನಿಮ್ಮ ಸಲಹೆ ಸರಿಯಲ್ಲ. ನನಗೆ ಹೆಚ್ಚಿನ ಪರಿಹಾರ ಹಣ ಸಿಗಲಿ ಎಂದು ನಿ.ಪಿ.8 ರಂತೆ ಇರುವ ಖೊಟ್ಟಿ ದಾಖಲಾತಿಯನ್ನು ಸೃಷ್ಟಿ ಮಾಡಿ ಹಾಜರುಪಡಿಸಿರುತ್ತೇನೆ ಎಂದು ಸೂಚಿಸುವ ನಿಮ್ಮ ಸಲಹೆ ಸರಿಯಲ್ಲ.

***ಮರು ವಿಚಾರಣೆ ಃ ಇಲ್ಲ.***

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಹೇಳಿಕೆಯ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಅದೆ,

1 ನೇ ಹೆ ಹಿ ದಿ ನ್ಯಾ ಹಾಗೂ ಸಿಜೆಎಂ,
ಧಾರವಾಡ